ನೆಲಮಂಗಲ ಟೌನಿನಲ್ಲಿ ಕ್ರೀಡಾಂಗಣ.

515(651)

ಶ್ರೀ ಅಂಜನಮೂರ್ತಿ(ನೆಲಮಂಗಲ): ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆಲಮಂಗಲ ಟೌನಿನಲ್ಲಿ ಕ್ರೀಡಾಂಗಣದ ಕಾರ್ಯವು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಇದಕ್ಕೆ ಕಾರಣಗಳೇನು?

ಆ) ಕ್ರೀಡಾಂಗಣದ ಕೆಲಸ ಪೂರ್ಣಗೊಳ್ಳಲು ಸಾಕಷ್ಟು ಹಣ ಬಿಡುಗಡೆ ಮಾಡಿ ಬಾಕಿ ಉಳಿದಿರುವ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ?

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ್ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ ಮತ್ತು ಆ) ಹೌದು. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಪ್ರಸಕ್ತ ಕಾಮಗಾರಿಗೆ ರೂ.೧೦.೦೦ ಲಕ್ಷಗಳನ್ನು ಬಿಡುಗಡೆ ಮಾಡಿದ್ದ ಮೇರೆಗೆ ಸದರಿ ಹಣವನ್ನು ವೆಚ್ಚ ಮಾಡಿ ಕೆಲಸ ಪ್ರಾರಂಭಿಸಿದ್ದು ನಂತರ ಕಾಮಗಾರಿಯು ಸ್ಥಗಿತಗೊಂಡಿದೆ. ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆಯ ಆಯುಕ್ತರು ಈ ರೀತಿ ಕೆಲಸ ಪ್ರಾರಂಭಗೊಂಡ ಹಿನ್ನೆಲೆಯಲ್ಲಿ ನೆಲಮಂಗಲ ತಾಲ್ಲೂಕು ಕ್ರೀಡಾಂಗಣದ ನಿರ್ಮಾಣ ಕುರಿತಂತೆ ಒಟ್ಟಾರೆ ರೂ.೨೪.೫೦ ಲಕ್ಷಗಳ ಅಂದಾಜು ಪಟ್ಟಿಗೆ ಸರ್ಕಾರದ ಘಟನೋತ್ತರ ಮಂಜೂರಾತಿ ನೀಡುವಂತೆ ಸಲ್ಲಿಸಿದ್ದ ಪ್ರಸ್ತಾವವನ್ನು ಈಗಾಗಲೇ ಪರಿಶೀಲಿಸಿ ಸರ್ಕಾರಿ ಆದೇಶ ಸಂಖ್ಯೆ ಆರ್‌ಡಿಪಿ 25 ಜಿಪಿಎಸ್‌೯೮ದಿನಾಂಕ:೨೯.೫.೯೮ರಲ್ಲಿ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಯವರಿಗೆ ರೂ.೩೦.೦೦ ಲಕ್ಷಗಳವರೆಗಿನ ಕಾಮಗಾರಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಅಧಿಕಾರವನ್ನು ಪ್ರತ್ಯಾಯೋಜಿಸಿರುವುದರಿಂದ ಮೇಲಿನ ಪ್ರಸ್ತಾವ ಕುರಿತು ಅವರ ಅನುಮೋದನೆ ಪಡೆಯಲು ಆಯುಕ್ತರಿಗೆ ಸೂಚಿಸಲಾಗಿದೆ.

ಸಾಮಾಜಿಕ ಅರಣ್ಯ ವಲಯಕ್ಕೆ ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾದ ಅನುದಾನ.

517(582)